# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 20 | Pages. 2 | Date: 16-12-2025, TUESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 20 – ಪುಟಗಳು : 2 | 16-12-2025 | ಮಂಗಳವಾರ | Ph: 8762954248 | ದರ : ₹1


# ಹಾಸನ ಡಿಸಿ ಕಚೇರಿಗೆ ಹುಸಿ ಬಾಂಬ್ ಬೆದರಿಕೆ!

## ಬಾಂಬ್ ನಿಷ್ಕ್ರಿಯ ದಳದಿಂದ ತಪಾಸಣೆ : ವದಂತಿಗೆ ಹೆದರಬೇಡಿ ಎಂದ ಜಿಲ್ಲಾಧಿಕಾರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಜಿಲ್ಲಾಧಿಕಾರಿ ಕಚೇರಿಗೆ ಬಾಂಬ್ ಇಟ್ಟಿರುವುದಾಗಿ ಇ-ಮೇಲ್ ಮೂಲಕ ಬಂದ ಬೆದರಿಕೆ ಸಂದೇಶದಿಂದ ಸೋಮವಾರ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಯಿತು.



ಜಿಲ್ಲಾಧಿಕಾರಿ ಕೆ.ಎಸ್. ಲತಾ ಕುಮಾರಿ ಅವರು ಸಂಜೆ ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿದ್ದರು. ಈ ಸಂದರ್ಭದಲ್ಲಿ ಪೊಲೀಸರು ಬಾಂಬ್ ನಿಷ್ಕ್ರಿಯ ದಳದೊಂದಿಗೆ ಕಚೇರಿಗೆ ಆಗಮಿಸಿ ಪರಿಶೀಲನೆ ನಡೆಸಿ, ಡಿಸಿ ಕಚೇರಿ ಆವರಣ ಹಾಗೂ ಒಳಭಾಗದಲ್ಲಿ ಇಂಚಿಂಚೂ ಪರಿಶೀಲನೆ ನಡೆಸಿದರು.

ಡಿವೈಎಸ್‌ಪಿ ಗಂಗಾಧರಪ್ಪ ಅವರ ನೇತೃತ್ವದಲ್ಲಿ ಶ್ವಾನದಳ ಮತ್ತು ಬಾಂಬ್ ನಿಷ್ಕ್ರಿಯ ದಳದ ತಜ್ಞರು ಸ್ಥಳಕ್ಕೆ ಆಗಮಿಸಿ ಸಂಪೂರ್ಣ ತಪಾಸಣೆ ನಡೆಸಿದರು. ಕಚೇರಿ ಕಟ್ಟಡ, ಆವರಣ ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ಸೂಕ್ಷ್ಮವಾಗಿ ಪರಿಶೀಲನೆ ನಡೆಸಿದರೂ ಯಾವುದೇ ಸ್ಫೋಟಕ ವಸ್ತು ಪತ್ತೆಯಾಗಲಿಲ್ಲ.

ಪರಿಶೀಲನೆ ಪೂರ್ಣಗೊಂಡ ಬಳಿಕ ಇದು ಹುಸಿ ಬಾಂಬ್ ಬೆದರಿಕೆ ಮೇಲ್ ಎಂಬುದು ದೃಢಪಟ್ಟಿದ್ದು, ಸಾರ್ವಜನಿಕರು ಹಾಗೂ ಸಿಬ್ಬಂದಿಯಲ್ಲಿ ಉಂಟಾಗಿದ್ದ ಆತಂಕ ನಿವಾರಣೆಯಾಯಿತು. ಮುನ್ನೆಚ್ಚರಿಕಾ ಕ್ರಮವಾಗಿ ಕೆಲಕಾಲ ಕಚೇರಿಯೊಳಗಿನ ಚಟುವಟಿಕೆಗಳನ್ನು ನಿಯಂತ್ರಿಸಲಾಗಿತ್ತು. ಹುಸಿ ಬೆದರಿಕೆ ಸಂದೇಶ ಕಳುಹಿಸಿದವರ ಪತ್ತೆಗೆ ಪೊಲೀಸರು ತನಿಖೆ ಕೈಗೊಂಡಿದ್ದು, ಇಂತಹ ಕೃತ್ಯಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.


### ಗಂಭೀರ ತನಿಖೆಗೆ ಡಿಸಿ ಆದೇಶ

ಜಿಲ್ಲಾಧಿಕಾರಿ ಕಚೇರಿಗೆ ಬಾಂಬ್ ಬೆದರಿಕೆ ಕರೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಲತಾಕುಮಾರಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಜನರು ಯಾವುದೇ ರೀತಿಯ ಗಾಬರಿಗೆ ಒಳಗಾಗಬಾರದು. ಇದು ಒಂದು ಹುಸಿಬಾಂ ಬೆದರಿಕೆ ಆಗಿದೆ ಎಂದು ಸ್ಪಷ್ಟಪಡಿಸಿದರು.

ಡಿ.15ರಂದು ಜಿಲ್ಲಾಧಿಕಾರಿ ಕಚೇರಿಯ ಅಧಿಕೃತ ಡಿಸಿ ಇ-ಮೇಲ್ ವಿಳಾಸಕ್ಕೆ ಅಆರ್ನಾ ಅಶ್ವಿನ್ ಶೇಖರ್‌ಟಿ ಎಂಬ ಹೆಸರಿನಲ್ಲಿ ಬಾಂಬ್ ಬೆದರಿಕೆ ಮೇಲ್ ಬಂದಿದೆ. ಈ ಮೇಲ್‌ನಲ್ಲಿ ಪಾಕಿಸ್ತಾನಿ ಐಎಸ್‌ಐ ಸೆಲ್ ಹಾಗೂ ತಮಿಳುನಾಡಿನ ಮಾಜಿ ಎಲ್‌ಟಿಟಿಇ ಸದಸ್ಯರು ಈ ಕೃತ್ಯಕ್ಕೆ ಸಿದ್ಧತೆ ನಡೆಸಿದ್ದಾರೆ ಎಂಬ ಉಲ್ಲೇಖವಿದೆ.

ಮೇಲ್ ಬಂದ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಲಾಗಿದ್ದು, ಹಾಸನ ಎಸಿ ಅವರು ಅಧಿಕೃತವಾಗಿ ದೂರು ದಾಖಲಿಸಿದ್ದಾರೆ. ಈ ಸಂಬಂಧ ಜೆಎಂಎಫ್‌ಸಿ ನ್ಯಾಯಾಧೀಶರಿಗೂ ಮಾಹಿತಿ ನೀಡಲಾಗಿದೆ ಎಂದು ಡಿಸಿ ಲತಾಕುಮಾರಿ ತಿಳಿಸಿದರು.

ಪೊಲೀಸರು, ಶ್ವಾನದಳ ಹಾಗೂ ಬಾಂಬ್ ನಿಷ್ಕ್ರಿಯ ದಳದ ಸಹಕಾರದಿಂದ ಡಿಸಿ ಕಚೇರಿಯ ಮೂಲೆ ಮೂಲೆಯನ್ನೂ ಸೂಕ್ಷ್ಮವಾಗಿ ಪರಿಶೀಲನೆ ನಡೆಸಲಾಗಿದೆ. ಎಲ್ಲಾ ಕೊಠಡಿಗಳಲ್ಲಿದ್ದ ಅಧಿಕಾರಿಗಳನ್ನು ಹೊರಗೆ ಕಳುಹಿಸಿ ಮುನ್ನೆಚ್ಚರಿಕಾ ಕ್ರಮವಾಗಿ ಒಂದೇ ಕೊಠಡಿಯಲ್ಲಿ ಅಧಿಕಾರಿಗಳ ಸಭೆ ನಡೆಸಲಾಗಿದೆ. ಪರಿಶೀಲನೆಯ ಬಳಿಕ ಯಾವುದೇ ಅನುಮಾನಾಸ್ಪದ ವಸ್ತು ಪತ್ತೆಯಾಗಿಲ್ಲ ಎಂದು ಡಿಸಿ ಸ್ಪಷ್ಟಪಡಿಸಿದ್ದಾರೆ.



ಈ ರೀತಿಯ ಬೆದರಿಕೆ ಕರೆಗಳು ಹಾಸನ ಮಾತ್ರವಲ್ಲದೆ ಮಂಗಳೂರು, ಬೀದರ್ ಸೇರಿದಂತೆ ರಾಜ್ಯದ ಐದು ಜಿಲ್ಲೆಗಳಿಗೆ ಬಂದಿರುವ ಮಾಹಿತಿ ಇದೆ. ಮೊದಲಿಗೆ ಇದನ್ನು ಪ್ರಾಕ್ ಎಂದುಕೊಂಡರೂ, ಸಾರ್ವಜನಿಕ ಸುರಕ್ಷತೆ ದೃಷ್ಟಿಯಿಂದ ನಿರ್ಲಕ್ಷ್ಯ ಮಾಡದೆ ಗಂಭೀರವಾಗಿ ಪರಿಗಣಿಸಲಾಗಿದೆ.

ಮೇಲ್‌ನಲ್ಲಿ ಐದು ಬಾಂಬ್ ಸ್ಫೋಟಿಸುವುದಾಗಿ ಕನ್ನಡದಲ್ಲಿ ಉಲ್ಲೇಖವಿದ್ದರೂ, ಯಾವ ಸಮಯದಲ್ಲಿ ಅಥವಾ ಯಾವ ಸಂದರ್ಭದಲ್ಲಿ ಸ್ಫೋಟ ನಡೆಯಲಿದೆ ಎಂಬ ಸ್ಪಷ್ಟ ಮಾಹಿತಿ ನೀಡಿಲ್ಲ ಎಂದು ಅವರು ಹೇಳಿದರು.

ಮಧ್ಯರಾತ್ರಿ 12.50ರ ವೇಳೆಗೆ ಈ ಮೇಲ್ ಬಂದಿದ್ದು, ನಮಗೆ ಇಂದು ಮಧ್ಯಾಹ್ನ 12 ಗಂಟೆ ಸುಮಾರಿಗೆ ಲಭ್ಯವಾಗಿದೆ. 2026ರ ಡಿಎಂಕೆ ಚುನಾವಣೆಯ ಗಮನ ಬೇರೆಡೆ ಸೆಳೆಯುವ ಉದ್ದೇಶದಿಂದ ಈ ರೀತಿಯ ಕೃತ್ಯ ನಡೆದಿರಬಹುದೆಂಬ ಮಾತುಗಳು ಕೇಳಿಬರುತ್ತಿದ್ದು, ಇದರ ಸತ್ಯಾಸತ್ಯತೆಯನ್ನು ಪತ್ತೆಹಚ್ಚಲು ಸಮಗ್ರ ತನಿಖೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಜನರು ಶಾಂತಿಯುತವಾಗಿರಬೇಕು, ಯಾವುದೇ ಆತಂಕಕ್ಕೆ ಒಳಗಾಗಬಾರದು. ಸರ್ಕಾರ ಮತ್ತು ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದು, ಸಾರ್ವಜನಿಕ ಸುರಕ್ಷತೆಗೆ ಮೊದಲ ಆದ್ಯತೆ ನೀಡಲಾಗಿದೆ ಎಂದು ಡಿಸಿ ಲತಾಕುಮಾರಿ ಭರವಸೆ ನೀಡಿದ್ದಾರೆ.

# ಶಾಮನೂರು ಶಿವಶಂಕರಪ್ಪ ನಿಧನ ತುಂಬಲಾರದ ನಷ್ಟ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರು, ಮಾಜಿ ಸಚಿವರು ಹಾಗೂ ಹಾಲಿ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ಸಮಾಜಕ್ಕೆ ಹಾಗೂ ರಾಜ್ಯಕ್ಕೆ ತುಂಬಲಾರದ ನಷ್ಟವುಂಟಾಗಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್ ಹೇಳಿದರು.

ತಾಲ್ಲೂಕಿನ ನುಗ್ಗೇಹಳ್ಳಿ ಪೊಲೀಸ್ ಠಾಣೆ ಮುಂಭಾಗ ಹೋಬಳಿ ವೀರಶೈವ ಸಮಾಜ ಹಾಗೂ ಗ್ರಾಮಸ್ಥರು ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿ, ವೀರಶೈವ ಸಮಾಜವನ್ನು ಕರ್ನಾಟಕವಲ್ಲದೆ ದೇಶಾದ್ಯಂತ ಸಂಘಟಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಅವರ ನಿಧನದಿಂದ ಸಮಾಜಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಕಾಂಗ್ರೆಸ್ ಪಕ್ಷದಲ್ಲಿ ಹಲವು ಬಾರಿ ಶಾಸಕರಾಗಿ ಹಾಗೂ ಸಚಿವರಾಗಿ ಜನಪರವಾಗಿ ಕಾರ್ಯ ನಿರ್ವಹಿಸಿದ್ದಾರೆ ಎಂದರು.

ವೀರಶೈವ ಮಹಾಸಭಾ ಜಿಲ್ಲಾ ಕಾರ್ಯದರ್ಶಿ ಎಂ.ಎಸ್. ಸುರೇಶ್ ಮಾತನಾಡಿ, ಶಾಮನೂರು ಶಿವಶಂಕರಪ್ಪ ಅವರು ರಾಜ್ಯದಲ್ಲಿ ವೀರಶೈವ ಮಹಾಸಭಾ ಗಟ್ಟಿಯಾಗಿ ನಿಲ್ಲಲು ಹೆಚ್ಚು ಶ್ರಮವಹಿಸಿ ಸಮಾಜವನ್ನು ಒಗ್ಗೂಡಿಸುವ ಕೆಲಸ ಮಾಡಿದ್ದರಿಂದ ಸಾಧ್ಯವಾಗಿದೆ ಎಂದು ತಿಳಿಸಿದರು.

ತಾಲೂಕು ಟಿಎಪಿಎಂಎಸ್ ನಿರ್ದೇಶಕ ತೋಟಿ ನಾಗರಾಜ್, ಜಿಲ್ಲಾ ಕಾರ್ಯದರ್ಶಿ ಕೃಪಾಶಂಕರ್, ಹಿರಿಯರಾದ ಎನ್.ಟಿ. ಸಿದ್ದಪ್ಪ, ವೀರಶೈವ ಸಮಾಜದ ಹೋಬಳಿ ಅಧ್ಯಕ್ಷ ಎನ್.ಎಸ್. ಗಿರೀಶ್, ಗ್ರಾಪಂ ಅಧ್ಯಕ್ಷ ನಟರಾಜ್, ಪ್ರಮುಖರಾದ ಎನ್.ಸಿ.ವಿಶ್ವನಾಥ್, ಹೋಟೆಲ್ ರಾಜಣ್ಣ ಇತರರಿದ್ದರು.

# ಕಬ್ಬು ಬೆಳೆಗಾರರಿಗೆ ನಿರಂತರ ಅನ್ಯಾಯ ಖಂಡಿಸಿ ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆಯ ಸಮಸ್ಯೆಗಳು ಸೇರಿದಂತೆ ಕಬ್ಬು ಬೆಳೆಗಾರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ತಾಲ್ಲೂಕು ಕಬ್ಬು ಬೆಳೆಗಾರರ ಒಕ್ಕೂಟದ ವತಿಯಿಂದ ಪಟ್ಟಣದ ತಾಲ್ಲೂಕು ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಲಾಯಿತು.

ರೈತ ಮುಖಂಡ ಹೆಚ್.ಆರ್ .ನವೀನ್ ಕುಮಾರ್ ಮಾತನಾಡಿ, ರೈತರು ಬೆಳೆಯುವ ಯಾವುದೇ ಬೆಳೆಗಳಿಗೆ ನೈಜ ಬೆಂಬಲ ಬೆಲೆ ಸಿಗದಿರುವುದು ದುರಂತ. ಕಬ್ಬು ಬೆಳೆಗಾರರ ಸ್ಥಿತಿ ಶೋಚನೀಯವಾಗಿದೆ. ಕಬ್ಬು ಬೆಳೆಯನ್ನೇ ನಂಬಿರುವ ರೈತರು ನಿರೀಕ್ಷೆಯಂತೆ ಲಾಭ ಹಾಗೂ ಸರ್ಕಾರದಿಂದ ಬೆಂಬಲ ಬೆಲೆ ಸೇರಿದಂತೆ ಅಗತ್ಯ ಸೌಕರ್ಯಗಳು ಸಿಗದೇ ಬದುಕು ಬೀದಿಗೆ ಬರುವ ಸ್ಥಿತಿ ನಿರ್ಮಾಣವಾಗಿದೆ ಎಂದು ಅಸಮಾಧಾನ ಹೊರಹಾಕಿದರು.

ಈ ಬಗ್ಗೆ ಎಲ್ಲಾ ರೈತರು ಒಗ್ಗಟ್ಟಿನಿಂದ ತಮ್ಮ ಹಕ್ಕುಗಳನ್ನು ಹೋರಾಟ ಮಾಡುವ ಮೂಲಕ ಪಡೆದುಕೊಳ್ಳಬೇಕಾಗಿದೆ. ರೈತರಿಗೆ ಪ್ರತಿ ಬಾರಿಯೂ ನಿಗದಿತ ಬೆಂಬಲ ಬೆಲೆಯನ್ನು ನೀಡದೆ ವಂಚನೆ ಮಾಡಲಾಗುತ್ತದೆ. ಈ ಬಗ್ಗೆ ಕೂಡಲೇ ಅಧಿಕಾರಿ ವರ್ಗ ಮಧ್ಯಪ್ರದೇಶ ಮಾಡಿ ಕಬ್ಬು ಬೆಳಗಾರರಿಗೆ ನ್ಯಾಯ ಒದಗಿಸಿ ಕೊಡಬೇಕೆಂದು ಮನವಿ ಮಾಡಿದರು.

ಬೆಲ್ಲ, ಸಕ್ಕರೆಯ ದರ ಹಾಗೂ ಟನ್ ಕಬ್ಬಿಗೆ ಸಿಗುತ್ತಿರುವ ಬೆಲೆಯನ್ನು ಲೆಕ್ಕಾಚಾರ ಹಾಕಿದರೆ ಕಬ್ಬು ಬೆಳೆಗಾರರಿಗೆ ಸಿಪ್ಪೆ, ಕಾರ್ಖಾನೆ ಅಥವಾ ಸರ್ಕಾರಕ್ಕೆ ಸಿಗುತ್ತಿರುವುದು ಹಣ್ಣು ಎಂಬಂತಾಗಿದೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಇನ್ನೂ ಐದು ವರ್ಷ ಹಿಂದೆ ಉಳಿದಿರುವಂತೆ ಕಾಣಿಸುತ್ತಿದೆ ಎಂದು ತಿಳಿಸಿದರು.

ಸರ್ಕಾರ ಮಧ್ಯಸ್ಥಿಕೆ ವಹಿಸುವ ಮೂಲಕ ಕಬ್ಬು ಬೆಳೆಗಾರರಿಗೆ ಬೆಂಬಲ ಬೆಲೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸದಿದ್ದರೆ ಪ್ರತಿಭಟನೆ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಭರತ್ ರಾಜ್, ಗೊಲ್ಲರ ಹೊಸಹಳ್ಳಿ ಮಂಜುನಾಥ್, ಕಲ್ಕೆರೆ ವಾಸುದೇವ್, ಗೋವಿನಕೆರೆ ತೇಜಸ್, ಜೋಗಿಪುರ ಮಂಜೇಗೌಡ ಹಾಗೂ ಇತರರಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗೆ ಪತ್ರ ಬರಹಗಾರರ ಆಗ್ರಹ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕಾವೇರಿ-2 ತಂತ್ರಾಂಶದಲ್ಲಿ ಸರಳೀಕರಣ ಹಾಗೂ ಪತ್ರ ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡಬೇಕೆಂದು ಆಗ್ರಹಿಸಿ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಗಿ ಪಡೆದ ಪತ್ರ ಬರಹಗಾರರ ಒಕ್ಕೂಟದಿಂದ ಸೋಮವಾರ ಉಪ ನೋಂದಣಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಒಕ್ಕೂಟದ ಜಿಲ್ಲಾಧ್ಯಕ್ಷ ಜಿ. ಕೃಷ್ಣ ಮಾತನನಾಡಿ, ಸರ್ಕಾರವು ಪಾರದರ್ಶಕತೆ, ವೇಗ ಹಾಗೂ ಡಿಜಿಟಲೀಕರಣದ ಹೆಸರಿನಲ್ಲಿ ಜಾರಿಗೆ ತಂದಿರುವ ಕಾವೇರಿ-2 ತಂತ್ರಾಂಶ, ಸಿಟಿಜನ್ ಲಾಗಿನ್ ವಿಧಾನವು ಸಾರ್ವಜನಿಕರಿಗೆ ಹಲವು ಸಂಕಷ್ಟಗಳನ್ನು ತಂದೊಡ್ಡಿದೆ. ಸಾರ್ವಜನಿಕರು ಆಸ್ತಿ ನೋಂದಣಿ ಮಾಡಿಕೊಳ್ಳುವ ಅಧಿಕಾರ ಹೊಂದಿದ್ದರೂ ಅದರ ದುರ್ಬಳಕೆ ಹೆಚ್ಚುತ್ತಿದೆ. ಕಂಪ್ಯೂಟರ್ ಕೇಂದ್ರಗಳಲ್ಲೂ ಆಸ್ತಿ ನೋಂದಣಿ ಮಾಡಿಕೊಡುತ್ತೇವೆಂದು ಜನರನ್ನು ಯಾಮಾರಿಸುತ್ತಾರೆ. ದಾಖಲೆ ಪತ್ರಗಳ ಅಧ್ಯಯನ ಮಾಡದೆ ಮನಸಿಗೆ ತೋಚಿದಂತೆ ದಾಖಲೆಗಳನ್ನು ಮಾಡಿಕೊಡುವುದು ನಾಗರಿಕರನ್ನು ಸಂಕಷ್ಟಕ್ಕೆ ಸಿಲುಕಿಸುತ್ತಿದೆ ಎಂದರು.

ಪರಿಸ್ಥಿತಿ ಇಷ್ಟೊಂದು ಬಿಗಡಾಯಿಸಿದ್ದರೂ ಕಾವೇರಿ-3 ಮೂಲಕ ಫೇಸ್‌ಲೆಸ್ ಹಾಗೂ ಪೇಪರ್‌ಲೆಸ್ ನೋಂದಣಿ ಜಾರಿಗೊಳಿಸಲು ಯತ್ನಿಸುತ್ತಿರುವುದು ಖಂಡನೀಯ. ನೋಂದಣಿಗೆ ವಂಚನೆ ಪ್ರಕರಣಗಳು ಹೆಚ್ಚುತ್ತಿರುವುದು ದಸ್ತಾವೇಜು ನೋಂದಣಿ ಕ್ಷೇತ್ರದ ಗಂಭೀರ ಸಮಸ್ಯೆಯಾಗಿದೆ ಎಂದರು.

ಬೇರೆ ರಾಜ್ಯಗಳಲ್ಲಿರುವಂತೆ ಪತ್ರಬರಹಗಾರರಿಗೆ ಪ್ರತ್ಯೇಕ ಲಾಗಿನ್ ಮತ್ತು ಗುರುತಿನ ಚೀಟಿ ನೀಡಬೇಕು. ನೋಂದಾಯಿಸಲ್ಪಡುವ ಪ್ರತಿ ದಸ್ತಾವೇಜಿಗೆ ಪತ್ರ ಬರಹಗಾರ ಅಥವಾ ವಕೀಲರ ಮೊಹರು ಕಡ್ಡಾಯಗೊಳಿಸಬೇಕು ಎಂದು ಒತ್ತಾಯಿಸಿದರು.

ಪತ್ರಬರಹಗಾರರ ಒಕ್ಕೂಟದ ಪರಮೇಶ್, ತುಳಸಿದಾಸ್, ರೇಖಾ ಪ್ರಸಾದ್, ರಾಜಮ್ಮ, ತುಳಸಿ ಪ್ರಸಾದ್ ಇತರರು ಹಾಜರಿದ್ದರು.

# ತಪ್ಪದೇ ವಾಹನ ಪರವಾನಗಿ-ವಿಮೆ ಮಾಡಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಆಟೋ ಹಾಗೂ ಇತರ ವಾಹನಗಳ ಸವಾರರು ವಾಹನ ಪರವಾನಗಿ, ವಿಮೆ ಹಾಗೂ ಅಗತ್ಯ ದಾಖಲಾತಿಗಳನ್ನು ಕಡ್ಡಾಯವಾಗಿ ಹೊಂದಿರಬೇಕು ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.



ಪಟ್ಟಣದ ಹೊಸ ಬಸ್ ನಿಲ್ದಾಣದ ಬಳಿ ಕುವೆಂಪು ಆಟೋ ಚಾಲಕರು ಮತ್ತು ಮಾಲೀಕರ ಸಂಘದ ಆಟೋ ನಿಲ್ದಾಣದಲ್ಲಿ ನಿರ್ಮಿಸಿರುವ ಛಾವಣಿ ಉದ್ಘಾಟಿಸಿ ಮಾತನಾಡಿ, ಅಪಘಾತ ಸಂದರ್ಭದಲ್ಲಿ ವಾಹನ ಪರವಾನಗಿ ಹಾಗೂ ಅಗತ್ಯ ದಾಖಲಾತಿಗಳು ಇಲ್ಲದಿದ್ದರೆ ಕಾನೂನು ತೊಡಕು ಉಂಟಾಗಲಿದೆ ಎಂದರು.

ಯಾವುದೇ ವಾಹನಗಳಿರಲಿ ಅದರ ಚಾಲಕನು ಸಂಚಾರಿ ನಿಯಮಗಳನ್ನು ಪಾಲಿಸುವುದು ಕಡ್ಡಾಯ ಹಾಗೂ ಸೂಕ್ತ. ವೇಗದಲ್ಲಿ ವಾಹನಗಳನ್ನುಚಾಲನೆ ಮಾಡುವುದು ಅಪಾಯಕಾರಿ. ನಿಮ್ಮ ಕುಟುಂಬವು ನಿಮ್ಮನ್ನೇ ನಂಬಿಕೊಂಡಿದೆ ಎಂಬುದನ್ನು ಮರೆಯಬಾರದು ಎಂದರು.

ಅವಧಿ ಮುಗಿದು ಹೆಚ್ಚು ಹಾನಿಯಾಗಿರುವ ಹಾಗೂ ತಾಂತ್ರಿಕ ದೋಷಗಳು ಮತ್ತು ಸಮಸ್ಯೆಗಳನ್ನು ಹೊಂದಿರುವ ವಾಹನಗಳನ್ನು ದಯವಿಟ್ಟು ಚಾಲನೆ ಮಾಡಬೇಡಿ. ಇದರಿಂದ ನಿಮ್ಮ ಬದುಕು ಹಾಗೂ ಸಮಾಜದ ಸ್ವಾಸ್ಥ್ಯ ಹಾಳಾಗಲಿದೆ ಎಂದು ಸಲಹೆ ನೀಡಿದರು.

ಆಟೋ ಚಾಲಕರು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಅದೇ ರೀತಿ ಎಲ್ಲಾ ಆಟೋ ಚಾಲಕರು ವಾಹನ ಪರವಾನಗಿ ಜತೆಗೆ ಕಡ್ಡಾಯವಾಗಿ ಇನ್ಸೂರೆನ್ಸ್ ಮಾಡಿಸಿಕೊಂಡು ಜಾಗೃತಿಯಿಂದ ವಾಹನ ಚಾಲನೆ ಮಾಡಬೇಕು. ದುಡಿಯುವ ಅವಸರದಲ್ಲಿ ಆರೋಗ್ಯ ಕಡೆಗಣಿಸಬೇಡಿ ಎಂದು ಸಲಹೆ ನೀಡಿದರು.

ಪುರಸಭಾ ಅಧ್ಯಕ್ಷ ಕೋಟೆ ಮೋಹನ್, ಆಟೋ ಚಾಲಕರ ಮತ್ತು ಮಾಲೀಕರ ಸಂಘದ ಪದಾಧಿಕಾರಿಗಳಾದ ಮಖಾನ್ ಬಾಬು, ಸಿ.ಪಿ.ಮಂಜುನಾಥ್, ಕೆರೆ ಬೀದಿ ರಂಗಣ್ಣ, ಗೋವಿಂದ, ತಗ್ಯಮ್ಮ ಬಡಾವಣೆ ಶಿವರಾಜ್, ಚಿಕ್ಕಣ್ಣ, ಲಕ್ಷ್ಮಣ್ ಇತರರಿದ್ದರು.

# ಡಾ. ಮುನಿವೆಂಕಟೇಗೌಡ ಜನ್ಮದಿನ ಪ್ರಯುಕ್ತ ಕ್ರೀಡಾಕೂಟ ಆಯೋಜನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಹಾಸನಾಂಬ ಒಳಾಂಗಣ ಕ್ರೀಡಾಂಗಣದಲ್ಲಿ ದಿ. ಡಾ. ಎ.ಸಿ.ಮುನಿವೆಂಕಟೇಗೌಡ ಅವರ ಜನ್ಮ ದಿನದ ಪ್ರಯುಕ್ತ ಡಿ. 27 ಹಾಗೂ 28 ರಂದು ವಲಯ ಮಟ್ಟದ ಜುಡೋ ಮತ್ತು 5ನೇ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕ್ರೀಡಾ ಪರಿಷತ್ ಕಾರ್ಯದರ್ಶಿ ಜೆ.ಐ.ನಿರಂಜನರಾಜ್ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಡಾ. ಎ.ಸಿ.ಎಂ. ಚಾರಿಟೆಬಲ್ ಟ್ರಸ್ಟ್, ಆಶ್ರಯ ಸೆಂಟರ್ ಫಾರ್ ಟ್ರಾನ್ಸ್‌ಫಾರಮೇಷನ್, ಜಿಲ್ಲಾ ಕ್ರೀಡಾ ಪರಿಷತ್, ಜಿಲ್ಲಾ ಅಮೆಚೂರ್ ಬಾಡಿ ಬಿಲ್ಡರ್ಸ್ ಸಂಸ್ಥೆ, ಜಿಲ್ಲಾ ಅಮೆಚೂರ್ ಜೊಡೋ ಸಂಸ್ಥೆ ವತಿಯಿಂದ ಎರಡು ದಿನಗಳ ಪಂದ್ಯಾವಳಿ ಆಯೋಜಿಸಲಾಗಿದೆ. ಕ್ರೀಡಾಪಟುಗಳಿಗೆ ಪ್ರವೇಶ ಶುಲ್ಕ 200 ರೂ. ನಿಗದಿಪಡಿಸಿದ್ದು ಡಿ. 20ರ ಒಳಗೆ ಮೊ.ನಂ. 9900839475 ಇಲ್ಲಿಗೆ ಕರೆ ಮಾಡಿ ಹೆಸರು ನೋಂದಾಯಿಸಬೇಕು ಎಂದು ಹೇಳಿದರು.

ಅಂತಾರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡೆಗಳಲ್ಲಿ (2024ರ ಜ. 1 ರಿಂದ ನ. 30ರ ವರೆಗೆ) ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದವರಿಗೆ ಸನ್ಮಾನ ಸಮಾರಂಭವನ್ನು ಡಿ. 28ರಂದು ಹಮ್ಮಿಕೊಳ್ಳಲಾಗಿದೆ. ಏಕಲವ್ಯ ಪ್ರಶಸ್ತಿಗೆ ಭಾಜನರಾದ ವೈಟ್ ಲಿಫ್ಟರ್ ಉಷಾ, ಜೀವಮಾನ ಸಾಧನ ಪ್ರಶಸ್ತಿ ಪಡೆದ ಫುಟ್ಬಾಲ್ ತರಬೇತುದಾರ ಕೃಷ್ಣ, ಹಾಕಿ ತರಬೇತುದಾರ ರವೀರ್ ಅವರನ್ನು ಗೌರವಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕ್ರೀಡಾ ಪರಿಷತ್ ಅಧ್ಯಕ್ಷ ಆರ್.ಪಿ. ವೆಂಕಟೇಶಮೂರ್ತಿ, ಕಾರ್ಯಾಧ್ಯಕ್ಷ ಪಿ.ಬಿ. ಕೇಶವಮೂರ್ತಿ, ಶರತ್ ಚಂದ್ರ, ಮಹದೇವ, ಡಾ. ಮಾಧವ್ ಇದ್ದರು.

# ಬಸ್ ಹರಿದು 4 ವರ್ಷದ ಮಗು ಸಾವು

ಅರಸೀಕೆರೆ: ಚಾಲಕನ ನಿರ್ಲಕ್ಷ್ಯದಿಂದ ಬಸ್ ಹತ್ತುತ್ತಿದ್ದ ಮಗು ಚಕ್ರದಡಿ ಸಿಲುಕಿ ಮೃತಪಟ್ಟಿರುವ ದಾರುಣ ಘಟನೆ ತಾಲ್ಲೂಕಿನ ಹೊಳಲ್ಕೆರೆ ಗೇಟ್ ಸಮೀಪ ಶನಿವಾರ ನಡೆದಿದೆ. ಹೊಳಲ್ಕೆರೆಯ ರಮೇಶ್ ಹಾಗೂ ಯಮುನಾ ದಂಪತಿ ಪುತ್ರಿ ಭಾರ್ಗವಿ (4) ಮೃತ ದುರ್ದೈವಿ. ಯಮುನಾ ಅವರು ಆಸ್ಪತ್ರೆಗೆ ತೋರಿಸಲೆಂದು ಪುತ್ರಿ ಜೊತೆಗೆ ಮೇಟಿಕುರ್ಕೆ ಆಸ್ಪತ್ರೆಗೆ ಹೋಗುತ್ತಿದ್ದಾಗ ಘಟನೆ ನಡೆದಿದೆ. ಜೆ.ಸಿ. ಪುರ ಕಡೆಯಿಂದ ಬಂದ್ ಬಸ್ ಹೊಳಲ್ಕೆರೆ ಗೇಟ್ ಸಮೀಪ ನಿಂತಿದ್ದು ಬಸ್‌ನ ಮೊದಲ ಬಾಗಿಲಿನಲ್ಲಿ ತಾಯಿ ಹಾಗೂ ಮಗಳು ಹತ್ತಲು ಮುಂದಾಗಿದ್ದಾರೆ. ಮಗು ಬಸ್ ಹತ್ತುವ ಮೊದಲೇ ಚಾಲಕ ಓಡಿಸಿದ್ದರಿಂದ ತಲೆಯ ಮೇಲೆ ಚಕ್ರ ಹರಿದಿದೆ. ಮಗುವಿನ ಎಡಕೈ, ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಯಿತು. ಪ್ರಥಮ ಚಿಕಿತ್ಸೆ ಕೊಡಿಸಿ ಅರಸೀಕೆರೆ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿದ್ದಾಗ ಮಾರ್ಗಮಧ್ಯೆ ಭಾರ್ಗವಿ ಮೃತಪಟ್ಟಿದ್ದಾಳೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಭದ್ರಾ ಅಭಯಾರಣ್ಯಕ್ಕೆ ಕೆಲವು ಕಾಡಾನೆಗಳ ಸ್ಥಳಾಂತರ ಶೀಘ್ರ

## ಡಿಸಿಎಫ್ ಸೌರಭ್‌ಕುಮಾರ್ ಭರವಸೆ | ರೈತ ಸಂಘದಿಂದ 5 ತಾಸು ಹೆದ್ದಾರಿ ತಡೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಮಲೆನಾಡು ಭಾಗದಲ್ಲಿ ತೀವ್ರ ಉಪಟಳ ನೀಡುತ್ತಿರುವ ಕಾಡಾನೆಗಳ ಸ್ಥಳಾಂತರ ಸಂಬಂಧ ಸರ್ಕಾರದೊಂದಿಗೆ ಚರ್ಚೆ ನಡೆಸಿದ್ದು ಕೆಲವು ಆನೆಗಳನ್ನು ಶೀಘ್ರ ಭದ್ರಾ ಅಭಯಾರಣ್ಯಕ್ಕೆ ಸ್ಥಳಾಂತರ ಮಾಡಲಾಗುವುದು ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್ ಭರವಸೆ ನೀಡಿದರು.



ಮಲೆನಾಡು ಭಾಗದಲ್ಲಿ ಹೆಚ್ಚಿರುವ ಕಾಡಾನೆ ಹಾವಳಿ ನಿಯಂತ್ರಣಕ್ಕೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಆಗ್ರಹಿಸಿ ತಾಲ್ಲೂಕು ಬೆಳೆಗಾರರ ಸಂಘ ಹಾಗೂ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಮನವಿ ಸ್ವೀಕರಿಸಿ ಮಾತನಾಡಿದರು.

ಕಾಡಾನೆ ಸಮಸ್ಯೆ ಕುರಿತು ಇಲಾಖೆ ಮುಖ್ಯ ಕಾರ್ಯದರ್ಶಿ ಹಾಗೂ ಸಚಿವರ ಗಮನಕ್ಕೆ ತರಲಾಗಿದೆ. ಜಿಲ್ಲಾಧಿಕಾರಿ ಸಹ ನಿತ್ಯ ಮಾಹಿತಿ ಪಡೆಯುತ್ತಿದ್ದಾರೆ. ಆಲೂರು ಭಾಗದಿಂದ ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಮಾಡಲಾಗುತ್ತಿದೆ. ಮೇಲಧಿಕಾರಿಗಳು ಪಕ್ಕದ ಅರಣ್ಯ ಇಲಾಖೆ ಜೊತೆ ಚರ್ಚಿಸಿದ್ದು ಇನ್ನೆರಡು ವಾರದಲ್ಲಿ ಕೆಲವು ಆನೆಗಳನ್ನು ಭದ್ರಾ ಅಭಯಾರಣ್ಯದತ್ತ ಸ್ಥಳಾಂತರಿಸಲಾಗುವುದು. ಬೆಳೆ ನಷ್ಟಕ್ಕೆ ಪರಿಹಾರ ಒದಗಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ತಾಲ್ಲೂಕು ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ಅದ್ದೂರಿ ಕುಮಾರ್ ಮಾತನಾಡಿ, ಕಾಡಾನೆ ಹಾವಳಿಯಿಂದ ರೈತರ ಜೀವನ ಬೀದಿಗೆ ಬಂದಿದೆ. ಮೊದಲೆಲ್ಲಾ ತೋಟಗಳಲ್ಲಿ ಕಾಣಿಸಿಕೊಳ್ಳುತ್ತಿದ್ದ ಕಾಡಾನೆಗಳು ಈಗ ಮನೆ ಬಾಗಿಲಿಗೆ ಬರುತ್ತಿವೆ. ಅನೇಕ ಜೀವ ಹಾಗೂ ಬೆಳೆ ಹಾನಿ ಸಂಭವಿಸಿದೆ. ಕಾಡಾನೆ ದಾಳಿಯಿಂದ ಸಾವು ಸಂಭವಿಸಿದಾಗ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಬಂದು ಮೊಸಳೆ ಕಣ್ಣೀರು ಸುರಿಸಿ ಪರಿಹಾರದ ಭರವಸೆ ನೀಡುತ್ತಾರೆ. ಮತ್ತೊಮ್ಮೆ ಅವರು ಬರುವುದು ಸಾವು ಸಂಭವಿಸಿದಾಗಲೇ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿ ಈಗಾಗಲೇ ಮೂರು ಬಾರಿ ರಸ್ತೆ ತಡೆ ನಡೆಸಿದ್ದರೂ ಪರಿಹಾರ ಸಿಕ್ಕಿಲ್ಲ. ಈಗ ಸಾಂಕೇತಿಕವಾಗಿ ಪ್ರತಿಭಟನೆ ನಡೆಸುತ್ತಿದ್ದು, ಪರಿಹಾರ ಸಿಗದಿದ್ದರೆ ಮುಂದಿನ ಪ್ರತಿಭಟನೆಗಳಿಂದ ಆಗುವ ಅನಾಹುತಕ್ಕೆ ಸರ್ಕಾರವೇ ನೇರ ಕಾರಣವಾಗುತ್ತದೆಂದು ಎಚ್ಚರಿಕೆ ನೀಡಿದರು. ರೈತ ಸಂಘದ ಅಧ್ಯಕ್ಷ ಭೋಗಮಲ್ಲೇಶ್ ಮಾತನಾಡಿ, ಕಾಡಾನೆಗಳನ್ನು ಶಾಶ್ವತವಾಗಿ ಸ್ಥಳಾಂತರ ಮಾಡಲು ಅರಣ್ಯ ಇಲಾಖೆಗೆ ಒಂದು ವಾರದ ಗಡುವು ನೀಡುತ್ತೇವೆ. ಅಧಿಕಾರಿಗಳು ಕಣ್ಣೊರೆಸುವ ತಂತ್ರ ಅನುಸರಿಸದೆ ವೈಜ್ಞಾನಿಕ ಪರಿಹಾರ ಕಂಡುಕೊಳ್ಳಬೇಕು. ಇಲ್ಲದಿದ್ದರೆ ಹಾಸನದ ಅರಣ್ಯ ಇಲಾಖೆ ಕಚೇರಿಗೆ ಮುತ್ತಿಗೆ ಹಾಕಲಾಗುವುದೆಂದು ಎಚ್ಚರಿಕೆ ನೀಡಿದರು. ಕಾಫಿ ಪ್ಲಾಂಟರ್ಸ್ ಸಂಘದ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಮಾತನಾಡಿದರು.

ಅರಣ್ಯ ಇಲಾಖೆ ಹಾಗೂ ಪೊಲೀಸರ ಮನವೊಲಿಕೆ ಬಳಿಕ ಸುಮಾರು 5 ಗಂಟೆ ನಂತರ ಪ್ರತಿಭಟನೆ ವಾಪಾಸ್ ಪಡೆಯಲಾಯಿತು. ಎಸಿಎಫ್ ಮೋಹನ್ ಕುಮಾರ್, ವಲಯ ಅರಣ್ಯಾಧಿಕಾರಿ ಯತೀಶ್, ಕಾಫಿ ಬೆಳೆಗಾರ ಸಂಘದ ಬಸವರಾಜು, ಗೋವಿಂದ ಶೆಟ್ಟಿ, ಶಿವಶಂಕರ್, ಕಮಲಾ ಚನ್ನಪ್ಪ, ರೈತ ಸಂಘದ ಸ್ವಾಮಿಗೌಡ, ಸುರೇಶ್, ಮಲ್ಲಿಕಾರ್ಜುನ, ಬಂಡೆ ರಮೇಶ್, ರವೀಂದ್ರ, ಹರೀಶ್ ಹಾಗೂ ಇತರರಿದ್ದರು.

# ಜಾಗತಿಕವಾಗಿ ಗುರುತಿಸಿದ ಜಾನಪದಕ್ಕೆ ಋಣಿ: ಗ್ಯಾರಂಟಿ ರಾಮಣ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಜಾನಪದ ಹಾಡುಗಳನ್ನೇ ಉಸಿರಾಗಿಸಿಕೊಂಡಿರುವ ನನ್ನಂತಹ ಕಲಾವಿದರಿಗೆ ವೇದಿಕೆ, ಸತ್ಕಾರ ಸಿಗುವುದು ಸಂತಸದ ಕ್ಷಣವೆಂದು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಜಿಲ್ಲಾ ಪ್ರಥಮ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ಹಾಗೂ ಜಾನಪದ ಕಲಾವಿದ ಗ್ಯಾರಂಟಿ ರಾಮಣ್ಣ ಸಂತಸ ವ್ಯಕ್ತಪಡಿಸಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಭಾನುವಾರ ಏರ್ಪಡಿಸಿದ್ದ ಜಿಲ್ಲಾ ಪ್ರಥಮ ಸಾಹಿತ್ಯ ಸಮ್ಮೇಳನದ ಸವಾಧ್ಯಕ್ಷತೆ ವಹಿಸಿ ಮಾತನಾಡಿದರು. 1970ರ ದಶಕದಲ್ಲಿ ಕಡುಬಡತನದ ನಡುವೆಯೂ ಅವರಿವರ ಬಳಿ ಆರ್ಥಿಕ ಸಹಾಯ ಪಡೆದು ಪಿಯುಸಿ ವರೆಗೆ ವ್ಯಾಸಂಗ ಮಾಡಿದೆ. ಕೌಟುಂಬಿಕ ಪರಿಸ್ಥಿತಿ ಹೀನಾಯವಾಗಿದ್ದರಿಂದ ವ್ಯಾಸಂಗ ಮುಂದುವರಿಸಲು ಆಗದೆ ಕೂಲಿ ಮಾಡುವುದು ಅನಿವಾರ್ಯವಾಗಿತ್ತು. 1979ರಲ್ಲಿ ರೈತ ಸಂಘದಿಂದ ನಡೆದ ಸರಳ ಮದುವೆ ಕಾರ್ಯಕ್ರಮದಲ್ಲಿ ನನಗೆ ಅನಿಸಿದ ಸಾಲುಗಳನ್ನು ಕವಿತೆ ರೂಪದಲ್ಲಿ ಹಾಡಿದ್ದಕ್ಕೆ ಜನರು ಒಂದು, ಎರಡು ರೂಪಾಯಿ ಹಣ ಕೊಟ್ಟಿದ್ದರು. ಆ ಬಳಿಕ ಹಾಡಿನ ಗೀಳು ನನ್ನಲ್ಲಿ ಹೆಚ್ಚಿತು. ರೈತ ಸಂಘದ ಹೋರಾಟಗಳಲ್ಲಿ ಹಾಡು ಹಾಡುತ್ತಾ ಅದನ್ನೇ ಜೀವನವನ್ನಾಗಿ ಮಾಡಿಕೊಂಡೆ ಎಂದು ಜೀವನಾನುಭವ ಹಂಚಿಕೊಂಡರು.

ಅಂದು ಪ್ರಾರಂಭವಾದ ಈ ಪಯಣ ಇಂದಿಗೂ ನಿಂತ ನೀರಾಗದೆ 55 ವರ್ಷಗಳಿಂದ ನನ್ನನ್ನು ಬೆಳೆಸಿಕೊಂಡು ಬಂದಿರುವುದಲ್ಲದೆ ರಾಜ್ಯ, ರಾಷ್ಟ್ರ ಮಟ್ಟದಲ್ಲೂ ಗುರುತಿಸುವಂತೆ ಮಾಡಿದೆ. ನನ್ನ ಏಳಿಗೆ ಬಯಸಿದ ಹಾಗು ಸಹಕಾರ ನೀಡಿದ ಎಲ್ಲರಿಗೂ ಕೃತಜ್ಞನಾಗಿರುತ್ತೇನೆ. ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಬಿ.ಎನ್.ಸುಬ್ಬೇಗೌಡ, ಚಿಂತಕ ಜ.ಹೊ.ನಾರಾಯಣಸ್ವಾಮಿ ಹಾಗೂ ರೈತ ನಾಯಕ ಪ್ರೊ.ನಂಜುಂಡಸ್ವಾಮಿ ಅವರು ನನ್ನ ಜೀವನದ ಮೇಲೆ ಪರಿಣಾಮ ಬೀರಿದ್ದು ಅವರ ಆಶೀರ್ವಾದದಿಂದಲೇ ಈ ಸಾಧನೆ ಸಾಧ್ಯವಾಗಿದೆಯೆಂದು ಸ್ಮರಿಸಿದರು.

ಸಮ್ಮೇಳನ ಉದ್ಘಾಟಿಸಿದ ಜಾನಪದ ಕಲಾವಿದ ಡಾ.ಪಿಚ್ಚಳ್ಳಿ ಶ್ರೀನಿವಾಸ ಮಾತನಾಡಿ, ಜಾನಪದ ಹಾಡುಗಳು ಕೇವಲ ಸಂಗೀತ, ರಾಗ ಮಾತ್ರವಲ್ಲದೆ ಜೀವನದ ಅನುಭವಗಳನ್ನು ತೆರೆದಿರುವ ವಿಶಿಷ್ಟ ಕಲೆಯಾಗಿದೆ. ಗ್ಯಾರಂಟಿ ರಾಮಣ್ಣ ಅವರು ಕವಿತೆಗಳ ಮೂಲಕ ಜನರಿಗೆ ಹತ್ತಿರವಾಗಿದ್ದಾರೆ. ಜೀವನದ ಅನುಭವಗಳನ್ನು ಕಾವ್ಯ ರೂಪಕ್ಕೆ ತರುವುದು ತಪಸ್ಸಿನ ಕೆಲಸ. ನಮ್ಮಲ್ಲಿರುವ ಜನಪದದ ವಿವೇಕ ಸಮಾಜದ ಕಣ್ಣು. ಅದನ್ನು ಕಾಪಾಡಿಕೊಳ್ಳುವುದು ಸಮಾಜದ ಆದ್ಯ ಕರ್ತವ್ಯವೆಂದರು. ಪತ್ರಕರ್ತ ನಾಗರಾಜ್ ಹೆತ್ತೂರು ಮಾತನಾಡಿ, ಹಾಸನದ ಕಂಚಮಾರನಹಳ್ಳಿ ಎಂಬ ಪುಟ್ಟ ಗ್ರಾಮದಲ್ಲಿ ಜನಿಸಿದ ಗ್ಯಾರಂಟಿ ರಾಮಣ್ಣ ಆಫ್ರಿಕಾದಲ್ಲಿ ನಡೆದ ಕಾರ್ಯಕ್ರಮದ ಅತಿಥಿಯಾಗಿ ಆಯ್ಕೆಯಾಗಿರುವುದು ಸಾಧನೆಯೇ ಸರಿ. ಕಾರ್ಯಕ್ರಮಗಳಿಂದ ಬರುತ್ತಿದ್ದ ಬಿಡಿಗಾಸಿನಿಂದ ಚಪ್ಪಲಿ ಖರೀದಿಸಿ ಊರೂರು ಸುತ್ತಿ ತಮ್ಮ ಪ್ರತಿಭೆ ಪ್ರದರ್ಶಿಸಿದ ಅವರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಲಭಿಸಬೇಕು. ಗ್ಯಾರಂಟಿ ರಾಮಣ್ಣ ಜಿಲ್ಲೆಯ ಹೆಮ್ಮೆ. ಅವರ ಕಲಾ ಸೇವೆಯನ್ನು ಎಲ್ಲರೂ ಗೌರವಿಸಬೇಕೆಂದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಸಮ್ಮೇಳನಾಧ್ಯಕ್ಷರ ಮೆರವಣಿಗೆ ನಡೆಯಿತು. ಕನ್ನಡ ಸಾಹಿತ್ಯ ಪರಿಷತ್ ಭವನದ ಆವರಣದಲ್ಲಿರುವ ಬುದ್ಧ, ಬಸವಣ್ಣ, ಡಾ.ಬಿ.ಆರ್.ಅಂಬೇಡ್ಕ ಹಾಗು ಕುವೆಂಪು ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು.

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್, ರಂಗಕರ್ಮಿ ಪ್ರಸಾದ್ ರಕ್ಷಿದಿ, ರವಿ ನಾಕಲಗೂಡು, ಸಾಹಿತಿ ಎನ್.ಶೈಲಜಾ ಹಾಸನ, ನಾಗರಾಜ್ ದೊಡ್ಡಮನಿ, ಎಚ್.ಎಸ್.ಬಸವರಾಜ್ ಮತ್ತಿತರರಿದ್ದರು.

# ಆರೋಗ್ಯಕರ ಜೀವನಕ್ಕೆ ವ್ಯಾಯಾಮ ರೂಢಿಸಿಕೊಳ್ಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಆರೋಗ್ಯಕರ ಜೀವನಕ್ಕೆ ಪರಿಣಾಮಕಾರಿ ಕ್ರಮಗಳನ್ನು ಪಾಲಿಸುವ ಅಗತ್ಯವಿದ್ದು ನಿತ್ಯ ವ್ಯಾಯಾಮ, ಧ್ಯಾನ, ನಡಿಗೆಯಂತಹ ಅಳವಡಿಸಿಕೊಳ್ಳಬೇಕೆಂದು ಡಾ. ಪದ್ಮ ಪ್ರಸಾದ್ ಸಲಹೆ ನೀಡಿದರು.

ನಗರದ ಹಾಸನ ಲಯನ್ಸ್ ಕ್ಲಬ್ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿ, ದೈಹಿಕ ಹಾಗು ಮಾನಸಿಕ ಆರೋಗ್ಯ ಸುಧಾರಣೆಗೆ ನಡಿಗೆ ನೆರವಾಗುತ್ತದೆ. ಸ್ನೇಹಿತರ ಭೇಟಿಯಿಂದ ಮನಸ್ಸು ಪ್ರಫುಲ್ಲವಾಗುತ್ತದೆ. ಬೆಳ್ಳಂ ಬೆಳಿಗ್ಗೆ ಪ್ರಕೃತಿ ಸೌಂದರ್ಯ ಸವಿಯಬಹುದು. ಮನುಷ್ಯ ಆಲಸ್ಯವನ್ನು ದೂರ ಮಾಡಬೇಕು. ನಿಶ್ಚಿತ ಗುರಿಯೊಂದಿಗೆ ಸಾಗಿದರೆ ಬೆಳಿಗ್ಗೆ ಬೇಗ ಎದ್ದೇಳುವುದು ಕಷ್ಟದ ಕೆಲಸವಲ್ಲ. ರಕ್ತದೊತ್ತಡ ಹಾಗು ಮಧು ಮೇಹ ಸಮಸ್ಯೆಯಿರುವವರು ಪ್ರತಿದಿನ ಕನಿಷ್ಟ ಅರ್ಧ ಗಂಟೆ ವಾಕಿಂಗ್ ಮಾಡಬೇಕೆಂದು ಕಿವಿಮಾತು ಹೇಳಿದರು.

ಹಿತ ಮಿತ ಆಹಾರ ರೂಢಿಸಿಕೊಳ್ಳಬೇಕು. ಸಿಹಿ ಪದಾರ್ಥಗಳ ಸೇವನೆ ಕಡಿಮೆ ಮಾಡಬೇಕು. ಪೌಷ್ಟಿಕ ಆಹಾರಕ್ಕೆ ಆದ್ಯತೆ ನೀಡಬೇಕು. ಒಬ್ಬ ವ್ಯಕ್ತಿ ದಿನಕ್ಕೆ 14 ಸಾವಿರ ಹೆಜ್ಜೆ ಅಂದರೆ ಕನಿಷ್ಟ 4 ಕಿ.ಮೀ. ನಡೆಯುವ ಅಭ್ಯಾಸ ಮಾಡಿಕೊಳ್ಳಬೇಕೆಂದರು.

ಮನುಷ್ಯ ಒತ್ತಡಕ್ಕೆ ಒಳಗಾಗಬಾರದು. ದಿಢೀರ್ ಶ್ರೀಮಂತನಾಗಬೇಕೆಂಬ ದುರಾಸೆಯಿಂದ ವಿಶ್ರಾಂತಿ ಇಲ್ಲದೆ ಕೆಲಸ ಮಾಡುವುದು ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಉತ್ತಮ ನಿದ್ರೆ ಆಯಸ್ಸು ಹೆಚ್ಚಿಸುತ್ತದೆ. ಉತ್ತಮರ ಸ್ನೇಹ, ಸಕಾರಾತ್ಮಕ ಚಿಂತನೆ ಹಾಗು ಕುಟುಂಬದೊಂದಿಗೆ ಸಮಯ ಕಳೆಯುವುದು ಆರೋಗ್ಯ ವೃದ್ಧಿಗೆ ಸಹಕಾರಿಯಾಗುತ್ತದೆ ಎಂದರು.

ಇತ್ತೀಚೆಗೆ ಕ್ಯಾನ್ಸರ್ ಪ್ರಕರಣಗಳು ಹೆಚ್ಚಾಗುತ್ತಿದ್ದು ಕುಟುಂಬದಲ್ಲಿ ಯಾರಿಗಾದರೂ ಕಾಯಿಲೆ ಇದ್ದರೆ ಅಂತವರು ಕಡ್ಡಾಯವಾಗಿ ತಪಾಸಣೆ ಮಾಡಿಸಿಕೊಳ್ಳಬೇಕು. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸಿದರೆ ಘೋರ ಪರಿಣಾಮ ಎದುರಿಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಸಿ.ಕೆ.ಕಿರಣ್ ಕುಮಾರ್, ರಾಜು, ರುಕೇಶ್ ಹಾಗು ರಾಮಚಂದ್ರ, ಪೊಲೀಸ್ ಇಲಾಖೆಯ ಮಂಜಪ್ಪ, ಸಿ.ಬಿ.ನಾಗರಾಜು, ರಂಗೇಗೌಡ ಹಾಗು ಭಾರತೀಯ ಸ್ಕೌಟ್ ಅಂಡ್ ಗೈಡ್ಸ್‌ನ ಆರ್.ಜಿ.ಗಿರೀಶ್, ಕಾಂಚನಾಮಾಲಾ, ವನಜಾ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಲಯನ್ಸ್ ಕ್ಲಬ್ ಅಧ್ಯಕ್ಷ ಹೆಚ್.ರಮೇಶ್, ಕಾರ್ಯದರ್ಶಿ ಸಿ.ಶಿವಸ್ವಾಮಿ, ಖಜಾಂಚಿ ಚನ್ನೇಗೌಡ, ಜಿಲ್ಲಾ ಸಂಪುಟ ಕಾರ್ಯದರ್ಶಿ ಹೆಚ್. ಆರ್.ಚಂದ್ರೇಗೌಡ, ವಲಯ ಅಧ್ಯಕ್ಷ ಹೆಚ್.ಕೆ.ನಾಗೇಶ್, ಮಾಜಿ ಅಧ್ಯಕ್ಷ ಐ.ಜಿ.ರಮೇಶ್, ಗಂಗಾಧರ್, ಮಲ್ಲೇಶ್‌ಗೌಡ, ನಾಗರಾಜು ಇತರರು ಹಾಜರಿದ್ದರು.

# ಉದ್ಯಾನ ಅಭಿವೃದ್ಧಿಗೆ ಅಗತ್ಯ ಕ್ರಮ: ಶಾಸಕ ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಪುರಸಭೆ ವ್ಯಾಪ್ತಿಯಲ್ಲಿ ಉದ್ಯಾನವನಗಳಿಗೆ ಮೀಸಲಿಟ್ಟಿರುವ ಜಾಗಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಭರವಸೆ ನೀಡಿದರು.

ಪಟ್ಟಣದ ಅಯ್ಯಪ್ಪಸ್ವಾಮಿ ದೇವಸ್ಥಾನದ ಮುಂಭಾಗ ದೊಡ್ಡ ಕೆರೆ ಅಭಿವೃದ್ಧಿ ಕಾಮಗಾರಿಗೆ ಭಾನುವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಪಟ್ಟಣದಲ್ಲಿ ಸಾರ್ವಜನಿಕರಿಗೆ ಬೆಳಿಗ್ಗೆ ಹಾಗೂ ಸಂಜೆ ವಾಯು ವಿಹಾರಕ್ಕೆ ಸ್ಥಳ ಕೊರತೆ ಇದೆ. ದೊಡ್ಡ ಕೆರೆ ಪಟ್ಟಣದ ಹೃದಯ ಭಾಗದಲ್ಲಿದ್ದು, 15 ವರ್ಷಗಳ ಹಿಂದೆ ದಿ. ಬೈಕೆರೆ ನಾಗೇಶ್ ಅವರ ಕನಸಿನ ಕೂಸಾಗಿ ಈ ಕೆರೆಯನ್ನು ಉಳಿಸಿ ಅಭಿವೃದ್ಧಿಪಡಿಸುವ ಕಾರ್ಯ ಕೈಗೊಳ್ಳಲಾಗಿತ್ತು. ಮುಂದಿನ ಹಂತದ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು.

ಕೆರೆ ಅಭಿವೃದ್ಧಿಗೆ 35 ಲಕ್ಷ ರೂ. ಮಂಜೂರು ಮಾಡಲಾಗಿತ್ತು. ಅದಕ್ಕೆ ಪುರಸಭೆಯ ಅನುದಾನ ಸೇರಿಸಿ ಒಟ್ಟು 50 ಲಕ್ಷ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತದೆ. ಮಕ್ಕಳಿಗೆ ಆಟೋಪಕರಣ, ಹಿರಿಯರಿಗೆ ವ್ಯಾಯಾಮ ಸಲಕರಣೆ, ಜಿಮ್ ಸಾಧನ, ಬೆಳಕು ವ್ಯವಸ್ಥೆ ಹಾಗು ಪೈಪ್‌ಗಳಿಗೆ ಬಣ್ಣ ಹಚ್ಚುವ ಮೂಲಕ ಕೆರೆಯ ಸುತ್ತಲ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ವಿವರಿಸಿದರು.

ಪಟ್ಟಣದ ಸೌಂದರ್ಯ ವರ್ಧನೆಗೆ ಒತ್ತು ನೀಡಲಾಗುತ್ತಿದ್ದು, ಉದ್ಯಾನವನಗಳಿಗೆ ಮೀಸಲಿಟ್ಟಿರುವ ಎಲ್ಲಾ ಜಾಗಗಳಲ್ಲಿ ಪಾರ್ಕ್ ನಿರ್ಮಿಸಲಾಗುವುದು. ಬಾಳೆಗದ್ದೆ, ಚಂಪಕನಗರ, ಮಲ್ಲಿಕಾರ್ಜುನ ನಗರ ಸೇರಿ ವಿವಿಧ ಪ್ರದೇಶಗಳಲ್ಲಿ 7 ರಿಂದ 8 ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಅನುದಾನ ಮೀಸಲಿಡಲಾಗಿದೆ. ಟೆಂಡರ್ ಪ್ರಕ್ರಿಯೆಯೂ ಶೀಘ್ರ ಪೂರ್ಣಗೊಳ್ಳಲಿದೆ ಎಂದು ಹೇಳಿದರು.

ಪಟ್ಟಣದ ಸ್ವಾಗತ ಬೋರ್ಡ್‌ಗಳ ನಿರ್ಮಾಣ, ರಸ್ತೆ ಸುಧಾರಣೆ, ಬೀದಿ ವ್ಯಾಪಾರಿಗಳಿಗೆ ವ್ಯವಸ್ಥಿತ ಶೆಡ್, ಬಸ್ ತಂಗುದಾಣ ಸೇರಿ ಹಲವು ಅಭಿವೃದ್ಧಿ ಯೋಜನೆಗಳನ್ನು ಪ್ರಾಮಾಣಿಕವಾಗಿ ಜಾರಿಗೆ ತರಲು ಪ್ರಯತ್ನಿಸುತ್ತಿದ್ದೇನೆ. ರಾಜಕೀಯಕ್ಕಿಂತ ಪಟ್ಟಣದ ಅಭಿವೃದ್ಧಿ ಮುಖ್ಯ. ಅದಕ್ಕೆ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಮನವಿ ಮಾಡಿದರು.

ಪುರಸಭೆ ಮಾಜಿ ಸದಸ್ಯರಾದ ರೇಖಾ, ರುದ್ರಕುಮಾರ್, ವನಜಾಕ್ಷಿ, ಪುರಸಭೆ ಮಾಜಿ ಅಧ್ಯಕ್ಷ ಜಾಕೀರ್, ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಇಂಜಿನಿಯರ್ ಸುಜಾತ ಇತರರಿದ್ದರು.

# ಸುಸ್ಥಿರ ಆರೋಗ್ಯಕ್ಕೆ ಕ್ರೀಡಾಕೂಟ ಸಹಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮನುಷ್ಯನ ಆರೋಗ್ಯ ಉತ್ತಮವಾಗಿರಲು ನಿತ್ಯ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಎಂದು ರೋಟರಿ -3182 ಜಿಲ್ಲಾ ಗವರ್ನರ್ ಕೆ. ಪಾಲಾಕ್ಷ ಹೇಳಿದರು.

ನಗರದ ಸರ್ಕಾರಿ ವಿಜ್ಞಾನ ಕಾಲೇಜು ಕ್ರೀಡಾಂಗಣದಲ್ಲಿ ಈಚೆಗೆ ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್ಸ್ ಸಂಸ್ಥೆ ವತಿಯಿಂದ ಅಂತಾರಾಷ್ಟ್ರೀಯ ರೋಟರಿ ಜಿಲ್ಲೆ 3182, ವಲಯ 9ರ ಸದಸ್ಯರಿಗಾಗಿ ಆಯೋಜಿಸಲಾಗಿದ್ದ ಟಿಕ್ರೀಡೋತ್ಸವ 2025ಟ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಕ್ರೀಡಾ ಮನೋಭಾವ, ಸೌಹಾರ್ದತೆ ಮತ್ತು ಗೆಲ್ಲುವ ಛಲಕ್ಕೆ ಸಾಕ್ಷಿಯಾಗಿದೆ. ಇಂತಹ ಅದ್ದೂರಿ ಆಯೋಜನೆಯು ನಮ್ಮ ವಲಯದ ಸಾಮರ್ಥ್ಯವನ್ನು ಇಡೀ ರೋಟರಿ ಜಿಲ್ಲೆಗೆ ತೋರಿಸುತ್ತದೆ. ಎಲ್ಲರೂ ಕ್ರೀಡಾ ಮನೋಭಾವದಿಂದ ಆಡಿ, ಶಿವಮೊಗ್ಗದಲ್ಲಿ ನಡೆಯಲಿರುವ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿಯೂ ವಲಯ 9 ಬಹುಮಾನ ಗಳಿಸುವಂತಾಗಲಿ ಎಂದರು.

ವಲಯ 9ರ ಸಹಾಯಕ ಗವರ್ನರ್ ಎ.ಜಿ. ಮಂಜುನಾಥ್ ಮಾತನಾಡಿ, ಇದು ಕೇವಲ ರೋಟರಿ ವಲಯ ಮಟ್ಟದ ಕ್ರೀಡಾಕೂಟವಾಗಿರದೆ. ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕಿಂತಲೂ ಹೆಚ್ಚು ಅದ್ದೂರಿಯಾಗಿ ಆಯೋಜನೆಗೊಂಡಿದೆ. ರೋಟರಿ ಕುಟುಂಬದಲ್ಲಿ ಕ್ರೀಡಾ ಚಟುವಟಿಕೆಗಳು ಸೌಹಾರ್ದತೆ ಮತ್ತು ಒಗ್ಗಟ್ಟನ್ನು ಬೆಳೆಸುತ್ತವೆ ಎಂದರು.

ರೋಟರಿ ಕ್ಲಬ್ ಆಫ್ ಹಾಸನ್ ರಾಯಲ್ಸ್ ಅಧ್ಯಕ್ಷ ಗಂಗಾಧರ್ ಮಾತನಾಡಿ, ನಾವು ಸೋಲುವುದನ್ನು ಕಲಿತಾಗಲೇ ಗೆಲುವನ್ನು ಸಂಭ್ರಮಿಸಲು ಸಾಧ್ಯ. ಮನುಷ್ಯರು ಸೋಲನ್ನು ಸ್ವೀಕರಿಸುವ ಮನೋಭಾವವನ್ನು ಜೀವನದಲ್ಲಿ ಅಳವಡಿಸಿಕೊಂಡರೆ ದುಃಖ ಎಂಬುದು ಇಲ್ಲದಂತಾಗಿ ಸಾಧನೆಯ ಕಡೆಗೆ ನಮ್ಮ ಚಿತ್ತ ಹೊರಳುತ್ತದೆ. ಇದನ್ನು ಕ್ರೀಡೆಗಳು ಕಲಿಸುತ್ತವೆ. ಹಾಗಾಗಿ ಕ್ರೀಡೆಯ ಮಹತ್ವವನ್ನು ಎಲ್ಲರೂ ಅರಿತುಕೊಳ್ಳಬೇಕು ಎಂದು ತಿಳಿಸಿದರು.

ವಲಯ 9ರ ವ್ಯಾಪ್ತಿಯಲ್ಲಿರುವ 10 ರೋಟರಿ ಕ್ಲಬ್‌ಗಳಿಂದ ಆಗಮಿಸಿದ್ದ ಸದಸ್ಯರು ಶಿಸ್ತುಬದ್ಧ ಪಥ ಸಂಚಲನ ನಡೆಸಿದರು. ಪ್ರತಿಯೊಂದು ಕ್ಲಬ್‌ನ ಸದಸ್ಯರೂ ಒಂದೇ ಬಣ್ಣದ ಟಿ ಶರ್ಟ್ ಧರಿಸಿ, ತಮ್ಮ ಕ್ಲಬ್‌ಗಳ ಬ್ಯಾನರ್‌ಗಳನ್ನು ಹಿಡಿದು ಸಾಗಿದ್ದು, ಸಮೂಹದಲ್ಲಿ ಶಿಸ್ತು ಮತ್ತು ಒಗ್ಗಟ್ಟನ್ನು ಪ್ರದರ್ಶಿಸಿತು. ಈ ಪಥ ಸಂಚಲನವು ಯಾವುದೇ ದೊಡ್ಡ ಮಟ್ಟದ ಕ್ರೀಡಾಕೂಟಗಳಿಗೂ ಕಡಿಮೆ ಇರಲಿಲ್ಲ ಎಂಬಂತೆ ಕ್ರೀಡಾಸ್ಫೂರ್ತಿ ಮೆರೆಯಿತು. ಬುಲೆಟ್ ಬೈಕ್ ಮೂಲಕ ಆಕರ್ಷಕ ಸವಾರಿಯೊಂದಿಗೆ ಕ್ರೀಡಾ ಜ್ಯೋತಿಯನ್ನು ಕುಂಡಕ್ಕೆ ತಂದು ಬೆಳಗಿದ ರೀತಿ, ಅದಕ್ಕೆ ಹೊಂದಿಯಾಗುವಂತೆ ಅಲಂಕರಿಸಲಾಗಿದ್ದ ವೇದಿಕೆ ಎಲ್ಲವೂ ನೆರೆದಿದ್ದವರ ಮನ ಸೆಳೆಯಿತು. ವಲಯ 9ರ ಜೋನ್ ಲೆಫ್ಟಿನೆಂಟ್‌ಗಳಾದ ಮಮತಾ ಪಾಟೀಲ್, ಶಿವಕುಮಾರ್, ಗಿರೀಶ್ ಅಡವಿಗೌಡ, ವಲಯ ಮಟ್ಟದ ಕ್ರೀಡಾಕೂಟದ ಸಂಯೋಜಕ ಯೋಗೀಶ್ ಎಸ್, ರೋಟರಿ ಕ್ಲಬ್ ಆಫ್ ರಾಯಲ್ ಕಾರ್ಯದರ್ಶಿ ರವಿಕುಮಾರ್ ಪಿ. ಖಜಾಂಚಿ ದಿಲೀಪ್ ಕುಮಾರ್ ಹಾಗೂ ಕ್ಲಬ್‌ನ ಎಲ್ಲಾ ಸದಸ್ಯರು ಹಾಜರಿದ್ದರು.

# ಸುಬ್ರಹ್ಮಣ್ಯ ಸ್ವಾಮಿ ದರ್ಶನಕ್ಕೆ ಭಕ್ತರ ದಂಡು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ದಕ್ಷಿಣ ಕಾಶಿ ಎಂದೇ ಪ್ರಖ್ಯಾತಿ ಹೊಂದಿರುವ ರಾಮನಾಥಪುರದ ಪ್ರಸನ್ನ ಶ್ರೀ ಸುಬ್ರಹ್ಮಣ್ಯಸ್ವಾಮಿ ತುಳು ಷಷ್ಠಿ ಮಹಾ ರಥೋತ್ಸವ ಹಿನ್ನೆಲೆಯಲ್ಲಿ ಶ್ರೀ ಕ್ಷೇತ್ರಕ್ಕೆ ಭಕ್ತರ ದಂಡು ಹರಿದು ಬರುತ್ತಿದೆ.

ಒಂದು ತಿಂಗಳು ನಡೆಯುವ ಜಾತ್ರೆಗೆ ನ. 26 ರಂದು ಚಾಲನೆ ದೊರೆತಿದ್ದು ಪ್ರತಿದಿನ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಬರುತ್ತಿದ್ದಾರೆ. ಡಿ. 26ರ ಶುಕ್ರವಾರ ಮಹಾರಥೋತ್ಸವ ನಡೆಯಲಿದೆ. ರಜಾ ದಿನವಾದ ಭಾನುವಾರ ನಿರೀಕ್ಷೆಗೂ ಮೀರಿ ಜನರು ಜಮಾಯಿಸಿದ್ದರು. ಜಾತ್ರಾ ಮೈದಾನ, ದೇವಾಲಯ ಮತ್ತು ಕಾವೇರಿ ನದಿ ಸ್ನಾನಘಟ್ಟದಲ್ಲಿ ಭಕ್ತರ ಸಂಖ್ಯೆ ವಿಪರೀತವಾಗಿತ್ತು.

ಭಕ್ತರು ಸುಬ್ರಹ್ಮಣ್ಯಸ್ವಾಮಿ ದೇವಾಲಯಲ್ಲಿ ಹರಕೆ ತೀರಿಸಿ, ವಾಸಾಂಜನೇಯ, ಅಗಸ್ತೇಶ್ವರ, ಪಟ್ಟಾಭಿರಾಮ, ರಾಘವೇಂದ್ರಮಠ, ವರದಾನ ಬಸವೇಶ್ವರ, ಚತುರ್ಯುಗಮೂರ್ತಿ ರಾಮೇಶ್ವರ ಸೇರಿ ವಿವಿಧ ದೇವಾಲಯಗಳಿಗೆ ಭೇಟಿ ನೀಡಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

# ಬೇರೆಯಾಗಿದ್ದ ಜೋಡಿಗಳನ್ನು ಒಂದುಗೂಡಿಸಿದ ಲೋಕ ಅದಾಲತ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಕೌಂಟುಂಬಿಕ ಕಲಹದಿಂದ ವಿಚ್ಛೇದನ ಹಂತಕ್ಕೆ ಬಂದಿದ್ದ ಐದು ಜೋಡಿಗಳನ್ನು ಒಂದುಗೂಡಿಸಿ ಸಹ ಜೀವನಕ್ಕೆ ಮತ್ತೊಂದು ಸುತ್ತಿನ ಮುನ್ನುಡಿ ಬರೆಯುವಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಯಶಸ್ವಿಯಾಗಿದೆ.

ಜಿಲ್ಲಾ ನ್ಯಾಯಾಲಯದಲ್ಲಿ ಹಮ್ಮಿಕೊಂಡಿದ್ದ ಈ ವರ್ಷದ ಕೊನೆಯ ಮೆಗಾ ಲೋಕ ಅದಾಲತ್‌ನಲ್ಲಿ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶೆ ಹೇಮಾವತಿ ಅವರು, ವಿಚ್ಛೇದನಕ್ಕಾಗಿ ನ್ಯಾಯಾಲಯ ಮೆಟ್ಟಿಲೇರಿದ್ದ ಐದು ಜೋಡಿಗಳಿಗೆ ಹಾರ ಬದಲಾಯಿಸಿ ಹಾಕಿ ಮನಸ್ತಾಪ ಮರೆತು ಒಟ್ಟಾಗಿ ಬಾಳುವಂತೆ ಕಿವಿಮಾತು ಹೇಳಿದರು. ಹಲವು ವರ್ಷಗಳಿಂದ ಬೇರೆ ಬೇರೆಯಾಗಿದ್ದ ಜೋಡಿಗಳು ಪರಸ್ಪರ ಒಟ್ಟಾಗುವ ಮೂಲಕ ನವ ಜೀವನದ ಸಂಕಲ್ಪ ಮಾಡಿದರು.

ಮಾಧವ್ ಮತ್ತು ಭಾವನ, ಸಂಜನಾ ಮತ್ತು ಲೋಕೇಶ್, ಸಕಲೇಶಪುರ ನ್ಯಾಯಾಲಯದ ಅಬ್ದುಲ್ ಮತ್ತು ನಸೀಮಾ ಹಾಗು ಅರಸೀಕೆರೆ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣ ಸಂಬಂಧ ತ್ರಿನೇತ್ರ ಮತ್ತು ನಯನ , ಕುಮಾರ್ ಮತ್ತು ನಂದಿನಿ ದಂಪತಿ ರಾಜಿ ಸಂಧಾನದ ಮೂಲಕ ಒಂದಾಗಿದ್ದು ಸಂತಸದೊಂದಿಗೆ ಮನೆಗೆ ತೆರಳಿದರು.

ನಂತರ ಮಾತನಾಡಿದ ಜಿಲ್ಲಾ ನ್ಯಾಯಾಧೀಶೆ ಹೇಮಾವತಿ ಅವರು, ಸಣ್ಣಪುಟ್ಟ ಮನಸ್ತಾಪದಿಂದ ಬೇರೆಯಾಗಲು ಮುಂದಾಗಿದ್ದ ಜೋಡಿಗಳನ್ನು ಒಂದು ಮಾಡಲಾಗಿದೆ. 33 ವರ್ಷಗಳಿಂದ ಬಾಕಿ ಉಳಿದಿದ್ದ ಆಸ್ತಿ ಸಂಬಂಧಿತ ವ್ಯಾಜ್ಯಕ್ಕೆ ರಾಜಿ ಸಂಧಾನದ ಮೂಲಕ ಪರಿಹಾರ ಕಂಡುಕೊಳ್ಳಲಾಗಿದೆ ಎಂದರು.

ಅದೇ ರೀತಿಯಲ್ಲಿ ಹಳೆಯ ಹಾಗೂ ದೀರ್ಘಕಾಲ ಬಾಕಿ ಉಳಿದಿರುವ ವ್ಯಾಜ್ಯಗಳನ್ನು ರಾಜಿ ಮೂಲಕ ಬಗೆಹರಿಸಿಕೊಂಡರೆ ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಾಣವಾಗಲಿದೆ. ಮುಂದಿನ ದಿನಗಳಲ್ಲಿ ರಾಜಿ ಸಂಧಾನದಿಂದ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವವರ ಸಂಖ್ಯೆ ಹೆಚ್ಚಲಿಯೆಂದು ಆಶಿಸಿದರು.

ಜಿಲ್ಲಾದಾದ್ಯಂತ ನಡೆಸಲಾದ ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿದ್ದ 3,864 ಪ್ರಕರಣ ಮತ್ತು 5,99,326 ವ್ಯಾಜ್ಯಪೂರ್ವ ಪ್ರಕರಣ ಸೇರಿ 6,03,190 ಪ್ರಕರಣಗಳು ಮುಕ್ತಾಯಗೊಂಡಿವೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ, ಇತರ ನ್ಯಾಯಾಧೀಶರು ಹಾಗೂ ವಕೀಲರು ಉಪಸ್ಥಿತರಿದ್ದರು.

# ಬೈರಾಪುರ-ಮಗ್ಗೆ ರಸ್ತೆ ದುರಸ್ತಿ: ಸಂಚಾರ ಬಂದ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಬೇಲೂರು-ಕೊಡ್ಲಿಪೇಟೆ ರಾಜ್ಯ ಹೆದ್ದಾರಿ 110ರ ರಸ್ತೆಯು ಚನ್ನಾಪುರ ಬಳಿ ಕುಸಿದಿದ್ದು ದುರಸ್ತಿ ಹಿನ್ನಲೆಯಲ್ಲಿ ಮುಂದಿನ 15 ದಿನಗಳ ಕಾಲ ಮಾರ್ಗದಲ್ಲಿ ಸಂಚಾರ ಬಂದ್ ಮಾಡಿ ವಾಹನ ಓಡಾಟಕ್ಕೆ ಪ್ರತ್ಯೇಕ ಮಾರ್ಗ ಕಲ್ಪಿಸಲಾಗಿದೆ.

ಬೈರಾಪುರದಿಂದ ಮಗ್ಗೆ ಮಾರ್ಗಮಧ್ಯೆ ರಸ್ತೆ ಕುಸಿದಿದೆ. ರಸ್ತೆಯಲ್ಲಿ ಅಲ್ಲಾ ರೀತಿಯ ವಾಹನಗಳ ಸಂಚಾರ ನಿಷೇಧಿಸಿದೆ ಎಂದು ಲೋಕೋಪಯೋಗಿ ಇಲಾಖೆ ಸಕಲೇಶಪುರ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಮುರುಗೇಶ್ ತಿಳಿಸಿದ್ದಾರೆ. ಬೇಲೂರು-ಕೊಡ್ಲಿಪೇಟೆ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿ 110ರ 50 ಕೀ.ಮೀ ಉದ್ದದ ರಸ್ತೆಯು ಮಗ್ಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚನ್ನಾಪುರ ಬಳಿ ಕೆರೆಯ ಏರಿಯ ಮೇಲೆ ಬಲಭಾಗದಲ್ಲಿ ಕುಸಿದಿದೆ. ತಡೆಗೋಡೆ ನಿರ್ಮಾಣವಾಗದೆ ವಾಹನ ಸಂಚಾರ ಮುಂದುವರಿದರೆ ರಸ್ತೆಗೆ ಹಾನಿ ಉಂಟಾಗುವ ಸಂಭವವಿರುವುದರಿಂದ ತಡೆಗೋಡೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಎಸ್‌ಡಿಆರ್‌ಎಫ್ / ಎನ್‌ಡಿಆರ್‌ಎಫ್ ಅಡಿಯಲ್ಲಿ 35 ಲಕ್ಷ ರೂ. ಅನುದಾನ ಬಿಡುಗಡೆಯಾಗಿದ್ದು ರಸ್ತೆಗೆ ತಡೆಗೋಡೆ ನಿರ್ಮಾಣ ಮಾಡಬೇಕಾಗಿರುವುದರಿಂದ 15 ದಿನಗಳ ಕಾಲ ತಾತ್ಕಾಲಿಕವಾಗಿ ಬಂದ್ ಮಾಡಬೇಕಿದೆ.

ಆದ್ದರಿಂದ ವಾಹನ ಸವಾರರು ಬದಲಿ ರಸ್ತೆಯಾದ ರಾಷ್ಟ್ರೀಯ ಹೆದ್ದಾರಿ 75 ಮೂಲಕ ಪಾಳ್ಯ, ನಲ್ಲೂರು, ಬೆಟ್ಟಹಳ್ಳಿ ಕ್ರಾಸ್ ಮಾರ್ಗವಾಗಿ ಮಗ್ಗೆ ಗ್ರಾಮಕ್ಕೆ ತಲುಪಬೇಕೆಂದು ಅಧಿಕಾರಿಗಳು ತಿಳಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಡಿಸೆಂಬರ್-16

1971: ಭಾರತ-ಪಾಕಿಸ್ತಾನ ಯುದ್ಧ ಅಂತ್ಯಗೊಂಡು, ಪಾಕಿಸ್ತಾನ ಸೇನೆಯ ಶರಣಾಗತಿಯೊಂದಿಗೆ ಬಾಂಗ್ಲಾದೇಶ ಸ್ವಾತಂತ್ರ್ಯ ಸಾಧನೆ.

1991: ಕಝಾಕಿಸ್ತಾನ್ ಸೋವಿಯತ್ ಒಕ್ಕೂಟದಿಂದ ಸ್ವಾತಂತ್ರ್ಯ ಘೋಷಿಸಿತು.

### ಜನನ

1775: ಪ್ರಸಿದ್ಧ ಇಂಗ್ಲಿಷ್ ಕಾದಂಬರಿಕಾರ್ತಿ ಜೇನ್ ಆಸ್ಟನ್

1917: ವಿಜ್ಞಾನ ಕಥೆ ಸಾಹಿತ್ಯದ ದಿಗ್ಗಜ ಆರ್ಥರ್ ಸಿ. ಕ್ಲಾರ್ಕ್

1963: ಬೆಂಜಮಿನ್ ಬ್ರ್ಯಾಟ್, ಅಮೆರಿಕದ ಪ್ರಸಿದ್ಧ ನಟ

### ಮರಣ

1707: ಟೋಕುಗಾವಾ ಮಿತ್ಸು ಕುನಿ, ಜಪಾನ್‌ನ ಪ್ರಸಿದ್ಧ ಇತಿಹಾಸಕಾರ ಮತ್ತು ರಾಜಕೀಯ ನಾಯಕ

1996: ಆಸ್ಕರ್ ಡಿ ಲಾ ಹೊಯಾ, ಕ್ಯೂಬಾ ಮೂಲದ ಖ್ಯಾತ ಬಾಕ್ಸರ್

# ಕಾಫಿ ವರ್ತಕರು ವಹಿವಾಟಿನ ಲೆಕ್ಕ ಹೊಂದಿರಬೇಕು: ಡಿವೈಎಸ್ಪಿ



ಸಕಲೇಶಪುರ: ಮಲೆನಾಡು ಭಾಗದಲ್ಲಿ ಕಾಫಿ ಹಾಗೂ ಮತ್ತಿತರ ಪದಾರ್ಥಗಳ ಕಳವು ಪ್ರಕರಣ ಹೆಚ್ಚುತ್ತಿದ್ದು ವರ್ತಕರು ತಮ್ಮ ಅಂಗಡಿಗಳಿಗೆ ಕಡ್ಡಾಯವಾಗಿ ಸಿಸಿಟಿವಿ ಕ್ಯಾಮರಾ ಅಳವಡಿಸಬೇಕು ಹಾಗು ವಹಿವಾಟಿನ ಲೆಕ್ಕ ಹೊಂದಿರಬೇಕು ಎಂದು ಸಕಲೇಶಪುರ ಪೊಲೀಸ್ ಅಧೀಕ್ಷಕ ಎಸ್.ಕೆ.ಮಾಲತೇಶ್ ಸೂಚನೆ ನೀಡಿದರು.

ಗ್ರಾಮಾಂತರ ಠಾಣೆಯಲ್ಲಿ ನಡೆದ ಕಾಫಿ ವರ್ತಕರ ಸಭೆಯಲ್ಲಿ ಮಾತನಾಡಿ, ವರ್ತಕರು ಕಾಫಿ, ಏಲಕ್ಕಿ, ಮೆಣಸು ಮಾರಾಟ ಮಾಡಲು ಬರುವವರ ಬಳಿ ಜಮೀನಿನ ಆರ್‌ಟಿಸಿ ಪಡೆಯಬೇಕು. ಅಂಗಡಿಯ ಒಳಭಾಗ ಮತ್ತು ಮುಂಭಾಗ ಹಾದು ಹೋಗಿರುವ ರಸ್ತೆಯ ದೃಶ್ಯಗಳು ಕಾಣುವ ಹಾಗೆ ಸಿಸಿಟಿವಿ ಕ್ಯಾಮರಾ ಕಡ್ಡಾಯವಾಗಿ ಆಳವಡಿಸಿ ಕನಿಷ್ಟ 3 ತಿಂಗಳ ಬ್ಯಾಕ್‌ಅಪ್ ಇಟ್ಟುಕೊಳ್ಳಬೇಕು. ಅಂಗಡಿಗಳಲ್ಲಿ ಒಂದು ರಿಜಿಸ್ಟರ್ ಇಟ್ಟು ಅದರಲ್ಲಿ ಪ್ರತಿದಿನ ಅವರ ಬಳಿಗೆ ಕಾಫಿ, ಏಲಕ್ಕಿ, ಮೆಣಸು ಮಾರಾಟ ಮಾಡಲು ಬರುವವರ ವಿಳಾಸ, ಮೊಬೈಲ್ ನಂಬರ್ ಹಾಗು ಅವರಿಂದ ಖರೀದಿಸಿದ ಕಾಫಿಯ ವಿವರವನ್ನು ನಮೂದು ಮಾಡಿಕೊಳ್ಳಬೇಕೆಂದು ಸೂಚನೆ ನೀಡಿದರು.

ಅನುಮಾನಸ್ಪದ ವ್ಯಕ್ತಿಗಳು ಕಾಫಿ, ಏಲಕ್ಕಿ, ಮೆಣಸು ಮಾರಲು ಬಂದಾಗ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು. ವರ್ತಕರು ಹಾಗೂ ಬೆಳೆಗಾರರು ಮುಂಜಾಗ್ರತಾ ಕ್ರಮ ವಹಿಸುವ ಮೂಲಕ ಕಳ್ಳತನ ಕಡಿಮೆ ಮಾಡಬಹುದು. ಅದಕ್ಕೆ ತಮ್ಮೆಲ್ಲರ ಸಹಕಾರ ಅತಿ ಮುಖ್ಯವಾಗಿರುತ್ತದೆಂದು ತಿಳಿಸಿದರು. ರಾತ್ರಿ ಗಸ್ತಿನ ವೇಳೆ ಅನುಮಾನಸ್ಪದವಾಗಿ ಓಡಾಡುವ ಮಾರುತಿ 800, ಓಮಿನಿ ಕಾರು, ಗೂಡ್ಸ್ ಆಟೋಗಳನ್ನು ಕಡ್ಡಾಯವಾಗಿ ತಪಾಸಣೆ ಮಾಡುವಂತೆ ಗಸ್ತು ಸಿಬ್ಬಂದಿಗೆ ಸೂಚಿಸಿದರು. ಯಸಳೂರು ಠಾಣೆ ಪಿಎಸ್‌ಐ ಸಲ್ಮಾನ್ ಖಾನ್ ತಂಬುಳ್ಳಿ, ನಗರ ಠಾಣೆ ಇನ್ಸಪೆಕ್ಟರ್ ವನರಾಜ್, ಗ್ರಾಮಾಂತರ ಠಾಣೆ ಪಿಎಸ್‌ಐ ಪ್ರಸನ್ನ ಕುಮಾರ್ ಹಾಗೂ ಇತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248